**Translation of Bengaluru North University Letter No BNU/Ren. Aff/232/2018-19 Dated 26 May 2018**

**BENGALURU NORTH UNIVERSITY**

Sri Devaraj Arasu Layout
Tamaka, Kolar – 563103
Dated 26 May 2018

**NOTIFICATION**

Subject : Renewal of Affiliation for the Academic Year 2018 – 19 reg.

The renewal of affiliation to the following courses run by Army Institute of Fashion & Design, Bangalore for the year 2018 – 19 has been sanctioned under the Karnataka State University Act 2000, 59 (17) comes under Bengaluru North University with the following terms and conditions.

| Course | Subject | Students Strength |
|---|---|---|
| **B.Sc *** | **Fashion and Apparel Design** | **60 (Sixty)** |
| **M.Sc** | **Apparel Technology and Management (Fashion and Apparel Design)** | **20 (Twenty)** |

* Permanent Affiliation has granted for four years from the academic year 2017-18 to 2020-21 as per Bangalore University letter No ACA-3/A3/Permt. Aff/AIFD/2017-2018 Dated 11 Nov 2017.

**Note** : Please find enclosed LIC Committee report for the year 2018-19. As per syndicate committee college has granted students intake. Colleges have issued renewal of affiliation as per intake submitted by them. College should rectify the observation and give compliance report to Bangalore University within 15 days failing which college affiliation for the next academic year will be cancelled.

**Conditions**

1. Should follow the rules and regulations prescribed by local enquiry committee.

2. The University will not permit any additional seats if the seat increased over the allotted seats.

3. The college should not extend or increase any branch / division without prior permission of Bangalore University.

4. While providing admissions to the above course the college should follow the norms strictly as per the Reservation quota as and when the Govt amends it.

5. The college should follow the rules & regulations framed by University from time to time in terms of students, teaching and non teaching staff. The college should follow the norms set by the University in terms of total strength and required qualification of the students at the time of admission.

6. As per university regulation college should collect the admission fee and other fee for PG course as fixed by the University from time to time. As per prescribed by the university, 50% student quota (Govt colleges 100%) university should give admission to the sponsored students.

7. It is considered as a serious offence of any type of harassment / sexual harassment by any individual (teaching/non-teaching management) or by any boys to any boys to any girls in the college premises or office or at working place as per the order dated 13.08.1997 of Supreme Court related to the case pertaining to Vaishaka V/S Rajasthan Govt. If any individual / student is indulging in these activities they can be removed from the college. The College should set up the Grievances Cell to prevent such activities in the college premises as per the Order of the Supreme Court.

8. The colleges should improve the method of teaching in such a way that to improve the standard of the students. The Principal and Managing Committee should treat the students and teachers in a good manner.

9. Without any reason the colleges should not keep any Certificates or any other documents of the students not for more than six months. All certificates and other documents of the students should be returned to the students immediately after confirmation of admission of the students and the same should be intimated to the University.

10. If any students is applying for Transfer Certificate the College should issue the TC to the students without creating any problems to the students. In this connection the University will not permit the colleges to collect any extra fee except the tuition fee for the incomplete semester.

11. Any type of Capitation fee should not be collected by the Colleges.

12. Should use Kannada language officially.

13. Colleges should submit application for renewal of affiliation for the year 2019–20.

14. Colleges those completed five years should get NAAC immediately.

15. Principal are directed to submit eligible faculty list to the concerned examination department Chairman for valuation work, failing which college affiliation will be cancelled.

16. If any outstanding for renewal of affiliation fee for the 2018-19 should be remitted to the Finance Office, Bengaluru North University, failing which college activities to be upheld.

By Order

Sd/- X X X
Registrar

To,

The Principal
Army Institute of Fashion and Design
Survey No 13
Nagareshwara Nagenahalli
Kothanur Post
Bangalore - 560077

Copy to :-

1. The Secretary, Education Dept. (University), Dr. Ambedkar Veedhi, Bangalore - 01
2 Director, College Education Board, Bangalore – 01
3. Registrar (Evaluation), Bengaluru North University, Kolar
4. Office copy

# ಬೆಂಗಳೂರು ಉತ್ತರ ವಿಶ್ವವಿದ್ಯಾಲಯ

ಶ್ರೀ ದೇವರಾಜ ಅರಸು ಬಡಾವಣೆ
ಟಮಕ, ಕೋಲಾರ–563 103

ಸಂಖ್ಯೆ: ಬೆಂ.ಉ.ವಿ./ಕು.ಸ.ಕಾ/ಸಂ.ನವೀ/232/2018–19

ದಿನಾಂಕ: 26–05–2018

## ಅಧಿಸೂಚನೆ

**ವಿಷಯ : 2018–19ನೇ ಶೈಕ್ಷಣಿಕ ಸಾಲಿಗೆ ಸಂಯೋಜನೆ ನವೀಕರಿಸುವ ಬಗೆಗೆ.**

* * *

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ 17ನೇ ಉಪಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ ಬೆಂಗಳೂರು ಉತ್ತರ ವಿಶ್ವವಿದ್ಯಾಲಯವು, 2018–19ನೇ ಸಾಲಿಗೆ ಬೆಂಗಳೂರಿನ **ಆರ್ಮಿ ಇನ್ಸ್ಟಿಟ್ಯೂಟ್ ಆಫ್ ಫ್ಯಾಷನ್ ಅಂಡ್ ಡಿಸೈನ್** ನಡೆಸುತ್ತಿರುವ ಕೆಳಕಂಡ ಕೋರ್ಸಿಗೆ/ಕೋರ್ಸುಗಳಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಸಂಯೋಜನೆಯನ್ನು ನವೀಕರಿಸಿ ಮುಂದುವರಿಸಿದೆ.

| ಕೋರ್ಸ್ | ವಿಷಯ | ವಿದ್ಯಾರ್ಥಿ ಪ್ರಮಾಣ |
|---|---|---|
| ಬಿ.ಎಸ್ಸಿ. | ಫ್ಯಾಷನ್ ಅಂಡ್ ಅಪೇರಲ್ ಡಿಸೈನ್* | 60 (ಅರವತ್ತು) |
| ಎಂ.ಎಸ್ಸಿ. | ಅಪೇರಲ್ ಅಂಡ್ ಅಪೇರಲ್ ಡಿಸೈನ್ (ಫ್ಯಾಷನ್ ಅಂಡ್ ಅಪೇರಲ್ ಡಿಸೈನ್) | 20 (ಇಪ್ಪತ್ತು) |

*** ಆಸ್ಟ್ರಿಚ್ ಗುರುತುಳ್ಳ ಕೋರ್ಸ್ 2017–18ನೇ ಸಾಲಿನಿಂದ 2020–21ನೇ ಸಾಲಿನವರೆಗೆ ನಾಲ್ಕು ವರ್ಷಗಳ ಅವಧಿಯ ಶಾಶ್ವತ ಸಂಯೋಜನೆಯನ್ನು ಹೊಂದಿವೆ. ಬೆಂಗಳೂರು ವಿಶ್ವವಿದ್ಯಾಲಯದ ಅಧಿಸೂಚನೆ ಸಂಖ್ಯೆ:ಎಸಿಎ–3/ಎ3/ಶಾ.ಸಂ./AIFD/2017-2018 ದಿ:11.11.2017.**

***ವಿ.ಸೂ:** 2018–19ನೇ ಸಾಲಿನ ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಲಗತ್ತಿಸಿದೆ. ಕಾಲೇಜುಗಳಿಗೆ ಸಿಂಡಿಕೇಟ್ /ಸ್ಥಳೀಯ ವಿಚಾರಣಾ ಸಮಿತಿ ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣದೊಂದಿಗೆ ಮಾತ್ರ ಸಂಯೋಜನೆಯನ್ನು ನವೀಕರಿಸಲಾಗಿದೆ. ಕಾಲೇಜು 15 ದಿನಗಳ ಒಳಗಾಗಿ ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ ನಮೂದಿಸಿರುವ ಕೊರತೆಗಳನ್ನು ಸರಿದೂಗಿಸಿಕೊಂಡು ಉತ್ತಮ ಪಡಿಸಿಕೊಂಡಿರುವ ಬಗ್ಗೆ ಹಾಗೂ ನ್ಯೂನ್ಯತೆಗಳನ್ನು ಸರಿಪಡಿಸಿಕೊಂಡಿರುವ ಕುರಿತು ಅನುಸರಣಾ ವರದಿಯನ್ನು ನೀಡತಕ್ಕದ್ದು. ಇಲ್ಲವಾದಲ್ಲಿ ಮುಂದಿನ ಶೈಕ್ಷಣಿಕ ವರ್ಷದ ಸಂಯೋಜನಾ ನವೀಕರಣದ ಅರ್ಜಿಯನ್ನು ಸ್ವೀಕರಿಸಲಾಗುವುದಿಲ್ಲ.*

**ಷರತ್ತುಗಳು:**

1. ಸ್ಥಳೀಯ ವಿಚಾರಣಾ ಸಮಿತಿಯು ನಮೂದಿಸಿರುವ ಷರತ್ತುಗಳನ್ನು ಪಾಲಿಸತಕ್ಕದ್ದು.
2. ನಿಗಧಿತ ವಿದ್ಯಾರ್ಥಿ ಪ್ರವೇಶ ಪ್ರಮಾಣವನ್ನು ಮೀರಿದ್ದಲ್ಲಿ ಹೆಚ್ಚುವರಿ ಪ್ರವೇಶ ಪ್ರಮಾಣಕ್ಕೆ ವಿಶ್ವವಿದ್ಯಾಲಯ ಅಂಗೀಕಾರ ನೀಡುವುದಿಲ್ಲ.
3. ಯಾವುದೇ ಕೋರ್ಸಿಗೆ/ಕೋರ್ಸುಗಳಿಗೆ ವಿಶ್ವವಿದ್ಯಾಲಯದ ಪೂರ್ವಾನುಮತಿಯಿಲ್ಲದೆ ಶಾಖೆಗಳನ್ನು ಹೆಚ್ಚಿಸಬಾರದು.
4. ಸದರಿ ಪದವಿ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶ ಕಲ್ಪಿಸುವಾಗ ಸರ್ಕಾರದಿಂದ ಆಗಿಂದಾಗ್ಗೆ ಹೊರಡಿಸುವ ಮೀಸಲಾತಿ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
5. ವಿಶ್ವವಿದ್ಯಾಲಯವು, ಕಾಲೇಜಿನ ವಿದ್ಯಾರ್ಥಿಗಳು, ಬೋಧಕರು ಹಾಗೂ ಬೋಧಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ/ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ಕಾಲೇಜು, ವಿಶ್ವವಿದ್ಯಾಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರದಂತೆ ಹಾಗೂ ವಿಶ್ವವಿದ್ಯಾಲಯವು ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಳ್ಳತಕ್ಕದ್ದು.
6. ಸ್ನಾತಕೋತ್ತರ ಪದವಿ ಕೋರ್ಸುಗಳಿಗೆ ವಿಶ್ವವಿದ್ಯಾಲಯ ಕಾಲಕಾಲಕ್ಕೆ ನಿಗಧಿಪಡಿಸುವ ಪ್ರವೇಶ ಮತ್ತು ಇತರೆ ಶುಲ್ಕಗಳನ್ನು ಮೀರದಂತೆ, ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣದ ಶೇಕಡಾ 50ರಂತೆ (ಸರ್ಕಾರಿ ಕಾಲೇಜುಗಳಿಗೆ ಶೇಕಡಾ 100ರಂತೆ) ವಿಶ್ವವಿದ್ಯಾಲಯವು ಪ್ರಾಯೋಜಿಸುವ ವಿದ್ಯಾರ್ಥಿಗಳಿಂದ ಪ್ರವೇಶವನ್ನು ಮಾಡಿಸಿಕೊಳ್ಳತಕ್ಕದ್ದು.

7. ವೈಶಾಕ v/s ರಾಜಸ್ಥಾನದ ರಾಜ್ಯ ಸರ್ಕಾರದ ವ್ಯಾಜ್ಯಕ್ಕೆ ಸಂಬಂಧಿಸಿದಂತೆ, ದಿನಾಂಕ:13-8-1997ರ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ, ಕಾಲೇಜು ಅಥವಾ ಕಛೇರಿ, ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ, ಯಾವುದೇ ವ್ಯಕ್ತಿಯಿಂದ (ಬೋಧಕ/ಬೋಧಕೇತರ/ಆಡಳಿತಮಂಡಳಿ) ಅಥವಾ ವಿದ್ಯಾರ್ಥಿಯಿಂದ ಮಹಿಳೆಯರಿಗೆ/ವಿದ್ಯಾರ್ಥಿನಿಯರಿಗೆ ಯಾವುದೇ ರೀತಿಯ ಕಿರುಕುಳ, ಲೈಂಗಿಕ ಕಿರುಕುಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ ವ್ಯಕ್ತಿ/ವಿದ್ಯಾರ್ಥಿ ಈ ರೀತಿಯಾದ ಚುಟುವಟಿಕೆಗಳಲ್ಲಿ ಭಾಗಿಯಾಗಿದ್ದಲ್ಲಿ ಅಂತಹವರನ್ನು ಕೆಲಸದಿಂದ/ವಿದ್ಯಾರ್ಥಿದೆಸೆಯಿಂದ ವಿಮುಕ್ತಿಗೊಳಿಸಬಹುದಾಗಿದೆ. ಕಾಲೇಜು ಈ ರೀತಿಯ ಅಪರಾದಗಳನ್ನು/ಚಟುವಟಿಕೆಗಳನ್ನು ಮಟ್ಟಹಾಕಲು ಸರ್ವೋಚ್ಚ ನ್ಯಾಯಲಯದ ಆದೇಶದಂತೆ ದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು.
8. ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಮಟ್ಟಕ್ಕೆ ಕಾಲೇಜು ಕೋರ್ಸುಗಳ ಶಿಕ್ಷಣ ಕ್ರಮವನ್ನು ಉತ್ತಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು ಹಾಗೂ ಸೇವೆಯಲ್ಲಿರುವ ಭೋಧಕರುಗಳನ್ನು ಪ್ರಾಂಶುಪಾಲರು/ ಆಡಳಿತಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.
9. ಕಾಲೇಜು ವಿನಾಕಾರಣ ವಿದ್ಯಾರ್ಥಿಗಳ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು ಆರು ತಿಂಗಳ ಅವಧಿ ಮೀರದಂತೆ ತಮ್ಮಲ್ಲಿಯೇ ಇಟ್ಟುಕೊಳ್ಳತಕ್ಕದ್ದಲ್ಲ, ಪ್ರವೇಶ ಅನುಮೋದನೆಗಾಗಿ ಸಲ್ಲಿಸಿರುವ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು, ಪ್ರವೇಶ ಅನುಮೋದನೆಯಾದ ನಂತರ ವಿದ್ಯಾರ್ಥಿಗಳಿಗೆ ತ್ವರಿತವಾಗಿ ವಿತರಣೆಯನ್ನು ಮಾಡಿ ವಿಶ್ವವಿದ್ಯಾಲಯಕ್ಕೆ ತಿಳಿಸತಕ್ಕದ್ದು.
10. ವಿದ್ಯಾರ್ಥಿಗಳು, ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸ್ಸಿದಲ್ಲಿ, ಕಾಲೇಜು ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ನೀಡದೆ, ವರ್ಗಾವಣೆ ಪತ್ರವನ್ನು ನೀಡತಕ್ಕದ್ದು. ಈ ಬಗ್ಗೆ ಆ ವರ್ಷದ/ಸೆಮಿಸ್ಟರ್‌ನ ಪೂರ್ಣವಾಗದ ಅವಧಿಯ ಭೋದನಾ ಶುಲ್ಕವನ್ನು ಹೊರತುಪಡಿಸಿ, ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಲು ನಿಯಮಾವಳಿ ಪ್ರಕಾರ ಅನುಮತಿ ಇರುವುದಿಲ್ಲ.
11. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.
12. ಆಡಳಿತ ವ್ಯವಹಾರದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸತಕ್ಕದ್ದು.
13. **2019-20ನೇ** ಸಾಲಿಗೆ ಕೋರ್ಸುಗಳ ಸಂಯೋಜನಾ ನವೀಕರಣಕ್ಕೆ ಕಾಲೇಜು ತಪ್ಪದೆ ಅರ್ಜಿಯನ್ನು ಸಲ್ಲಿಸತಕ್ಕದ್ದು.
14. ***ಐದು ವರ್ಷಗಳನ್ನು ಪೂರೈಸಿರುವ ಕಾಲೇಜುಗಳು ನ್ಯಾಕ್ (NAAC) ಅನುಮೋದನೆಯನ್ನು ಕೂಡಲೇ ಪಡೆದುಕೊಳ್ಳತಕ್ಕದ್ದು.***
15. ಪ್ರಾಂಶುಪಾಲರು, ಮೌಲ್ಯಮಾಪನ ಕಾರ್ಯಕ್ಕಾಗಿ ಅರ್ಹ ಶಿಕ್ಷಕರ ಪಟ್ಟಿಯನ್ನು ಸಂಬಂಧಿಸಿದ ಪರೀಕ್ಷಾ ಮಂಡಳಿಗಳ ಅಧ್ಯಕ್ಷರುಗಳಿಗೆ ತಪ್ಪದೇ ಸಲ್ಲಿಸತಕ್ಕದ್ದು. ತಪ್ಪಿದ್ದಲ್ಲಿ ಕಾಲೇಜಿನ ಸಂಯೋಜನೆಯನ್ನು ರದ್ದುಪಡಿಸಲಾಗುವುದು.
16. 2018-19ನೇ ಶೈಕ್ಷಣಿಕ ಸಾಲಿನ ಸಂಯೋಜನಾ ಶುಲ್ಕ ಬಾಕಿ ಇರುವ ಮೊತ್ತವನ್ನು ವಿತ್ತಾಧಿಕಾರಿಗಳು, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ ಇವರಿಗೆ ಪಾವತಿಸತಕ್ಕದ್ದು, ಇಲ್ಲವಾದಲ್ಲಿ ಅಂತಹ ಕಾಲೇಜುಗಳ ಮುಂದಿನ ಕಾರ್ಯಚಟುವಟಿಕೆಗಳನ್ನು ತಡೆಹಿಡಿಯಲಾಗುವುದು.

**ಆಜ್ಞೆ ಮೇರೆಗೆ**

Office of the Registrar * KOLAR *

ಕುಲಸಚಿವರು

ಗೆ,

**ಪ್ರಾಂಶುಪಾಲರು,**
**ಆರ್ಮಿ ಇನ್ಸಿಟ್ಯೂಟ್ ಆಫ್ ಫ್ಯಾಷನ್ ಅಂಡ್ ಡಿಸೈನ್**
**ನಂ.13, ನಗರೇಶ್ವರ ನಾಗೇಹಳ್ಳಿ, ಕೊತ್ತನೂರು ಅಂಚೆ, ಬೆಂಗಳೂರು – 560 077**

**ಪ್ರತಿಗಳು:**

1) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯ), ಬಹುಮಹಡಿಗಳ ಕಟ್ಟಡ, ಡಾ॥ ಅಂಬೇಡ್ಕರ್ ವೀಧಿ, ಬೆಂಗಳೂರು-1.
2) ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು-1.
3) ಕುಲಸಚಿವರು (ಮೌಲ್ಯಮಾಪನ), ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಕೋಲಾರ.
4) ಕಛೇರಿ ಪ್ರತಿ.